**ದಿನಾಂಕ 26.11.2025 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ಶ್ರೀ. ಎಸ್.ಎಂ. ಅರ್ಜಿದಾರರರ ಪರ ವಕೀಲರಿಂದಃ**

ನಾನು ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಅಪರಾಧ ಸಂಖ್ಯೆ 152/2020 ರ ಪ್ರಥಮ ವರ್ತಮಾನ ವರದಿ, ಅದರಲ್ಲಿ ಸಲ್ಲಿಸಿರುವ ದೂರು, ಪಂಚನಾಮ, ಕಚ್ಚಾ ನಕಾಶೆ, ಎಂ ವಿ ಎ ವರದಿ, ಗಾಯದ ಪ್ರಮಾಣ ಪತ್ರ, ದೋಷಾರೋಪಣಾ ಪಟ್ಟಿ ಸಿಸಿ ಸಂಖ್ಯೆ 585/2021 ರ ಆದೇಶ ಪುಟಗಳ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.1 ರಿಂದ 8 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆ ಮೇರೆಗೆ ಮುಂದೂಡಲಾಯಿತು.**

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಎಂ.ಎ.ಸಿ.ಟಿ., ತಿ.ನರಸೀಪುರ.**